## ರಾಜ್ಯದ ಸೌಹಾರ್ದ ಸಹಕಾರಿಗಳಲ್ಲಿ ಒಂದು ವಿನಮ್ರ ಮನವಿ.

## ಜಲಾವೃತ ಗ್ರಾಮಗಳ ಸಂತ್ರಸ್ತರಿಗೆ ಉದಾರ ದೇಣಿಗೆ ನೀಡುವ ಕುರಿತು.

ಉತ್ತರ ಕರ್ನಾಟಕದ ಹಲವು ಸ್ಥಳಗಳಲ್ಲಿ ಪ್ರಕೃತಿ ವಿಕೋಪದಿಂದ ಜಲಾವೃತವಾಗಿ ಜನರು ಸಂಕಷ್ಟದಲ್ಲಿದ್ದು, ಜೀವಹಾನಿ, ಮನೆ-ಮಠ ಆಸ್ತಿ-ಪಾಸ್ತಿಗಳನ್ನು ಕಳೆದುಕೊಂಡಿದ್ದಾರೆ. ಅನ್ನ ಆಹಾರಗಳು ಸಿಗದಂತಾಗಿದೆ ಹಾಗೂ ರಾಜ್ಯದ ಕೆಲವು ಪ್ರದೇಶಗಳಲ್ಲಿ ಭಾರಿ ಮಳೆ ಸುರಿಯುತ್ತಿರುವುದು ತಮಗೆಲ್ಲ ತಿಳಿದ ವಿಷಯವಾಗಿದೆ. ಸಂತ್ರಸ್ತರ ಪುನರ್‌ವಸತಿಗಾಗಿ ಕೇಂದ್ರ ಸರಕಾರ, ರಾಜ್ಯ ಸರಕಾರ ಹಾಗೂ ಸಂಘ ಸಂಸ್ಥೆಗಳು ನೆರವು ನೀಡುವಲ್ಲಿ ಮುಂದಾಗಿವೆ ಹಾಗೂ ಮನವಿ ಸಹ ಮಾಡಿದ್ದಾರೆ. ಸೌಹಾರ್ದ ಸಹಕಾರಿಗಳು ಸಹ ಈ ಸಂದರ್ಭದಲ್ಲಿ ನೆರವು ನೀಡಲು ಮುಂದಾಗುವುದು ಅವಶ್ಯವಾಗಿದೆ. ಕಳೆದ ವರ್ಷ ಕೇರಳ ಮತ್ತು ಮಡಿಕೇರಿಗಳಲ್ಲಿ ನೆರೆ ಹಾವಳಿಯಾದಾಗ ಸಂಯುಕ್ತ ಸಹಕಾರಿಯ 17 ನೇ ಸಾಮಾನ್ಯ ಸಭೆಯ ಸಂದರ್ಭದಲ್ಲಿ ಅಂದಿನ ಮಾನ್ಯ ಸಹಕಾರ ಸಚಿವರಿಗೆ ಎಲ್ಲಾ ಸೌಹಾರ್ದ ಸಹಕಾರಿಗಳ ಪರವಾಗಿ ರೂ. 25 ಲಕ್ಷಗಳನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾಗಿದೆ. ಅದೇ ರೀತಿ ನೇಪಾಳ, ಹಾಗೂ ಜಮ್ಮು ಕಾಶ್ಮೀರಗಳಲ್ಲಿ ನೆರೆ ಹಾವಳಿ ಸಂದರ್ಭದಲ್ಲಿ ಪ್ರಧಾನ ಮಂತ್ರಿಗಳ ನೆರೆ ಪರಿಹಾರ ನಿಧಿಗೆ ರೂ.10 ಲಕ್ಷಗಳನ್ನು ದೇಣಿಗೆಯಾಗಿ ನೀಡಿದೆ. ನೆರೆ ಸಂತ್ರಸ್ತರಿಗೆ ತಾವುಗಳೆಲ್ಲ ಉದಾರವಾಗಿ ದೇಣಿಗೆ ನೀಡಿರುವುದಕ್ಕೆ ಸಂಯುಕ್ತ ಸಹಕಾರಿಯು ಕೃತಜ್ಞತೆಗಳನ್ನು ಸಲ್ಲಿಸುತ್ತದೆ.

ಅದರಂತೆ ಈ ಬಾರಿಯೂ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು ಜಲಾವೃತ ಗ್ರಾಮಗಳ ನೆರೆ ಸಂತ್ರಸ್ತರಿಗೆ ಸಾಂತ್ವನವನ್ನು ಹೇಳುವುದರ ಜೊತೆಗೆ ಅವರಿಗೆ ನೆರವನ್ನು ನೀಡುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಸೌಹಾರ್ದ ಸಹಕಾರಿಗಳಿಂದ ದೇಣಿಗೆಯನ್ನು ಸಂಗ್ರಹಿಸಿ, ಸಂಕಷ್ಟದಲ್ಲಿರುವ ಜನರಿಗೆ ತಲುಪಿಸಲು ಉದ್ದೇಶಿಸಿದೆ. ಆದ್ದರಿಂದ ರಾಜ್ಯದ ಎಲ್ಲ ಸೌಹಾರ್ದ ಸಹಕಾರಿಗಳು ಉದಾರವಾಗಿ ದೇಣಿಗೆಯನ್ನು ಕಳುಹಿಸಿ ಈ ವಿಪತ್ತಿನ ಪರಿಹಾರ ಕಾರ್ಯದಲ್ಲಿ ಭಾಗಿಗಳಾಗಬೇಕೆಂದು ಸಂಯುಕ್ತ ಸಹಕಾರಿಯ ಆಡಳಿತ ಮಂಡಲಿಯು ಅಪೇಕ್ಷಿಸುತ್ತದೆ. ಅಲ್ಲದೇ ಸ-ಶಕ್ತ ಸೌಹಾರ್ದ ಸಹಕಾರಿಗಳು ಹಾಗೂ ಸೌಹಾರ್ದ ಸಹಕಾರಿಗಳ ಅಧ್ಯಕ್ಷರು/ಉಪಾಧ್ಯಕ್ಷರು/ನಿರ್ದೇಶಕರುಗಳು ಸಹ ವೈಯಕ್ತಿಕವಾಗಿ ಹೆಚ್ಚಿನ ಪ್ರಮಾಣದಲ್ಲಿ ದೇಣಿಗೆಯನ್ನು ನೀಡಲು ವಿನಂತಿಸಿದೆ.

ದೇಣಿಗೆ ಕಳುಹಿಸುವ ಸೌಹಾರ್ದ ಸಹಕಾರಿಗಳು "KARNATAKA STATE SOUHARDA FEDERAL COOPERATIVE Ltd.," ಎಂಬ ಹೆಸರಿನಲ್ಲಿ ಚೆಕ್/ಡಿಡಿ ಕಳುಹಿಸಲು ಕೋರಿದೆ. ಅಥವಾ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಇದರ o/C NO. 0243102000013873, IFSC CODE : IBKL0000243, BRANCH : MARGOSA ROAD,MALLESHWARAM IDBI ಬ್ಯಾಂಕ್‌ಗೆ NEFT/RTGS" ಮೂಲಕ ಕಳುಹಿಸಲು ಕೋರಿದೆ. RTGS / NEFT ಮೂಲಕ ಹಣ ವರ್ಗಾಯಿಸಿದ್ದಲ್ಲಿ, ಸದರಿ ವಿವರಗಳನ್ನು ಸಂಯುಕ್ತ ಸಹಕಾರಿಗೆ ಲಿಖಿತವಾಗಿ ಕಳುಹಿಸಲು ಕೋರಿದೆ. ಸಂತ್ರಸ್ಥರಿಗೆ ಧನಸಹಾಯ ನೀಡುವ ಸಂಸ್ಥೆಗಳ ಹೆಸರುಗಳನ್ನು ಹಾಗೂ ಮೊತ್ತವನ್ನು ಮುಂದಿನ ತಿಂಗಳ ಸ್ವಾಭಿಮಾನಿ ಸಹಕಾರಿ ಪತ್ರಿಕೆಯಲ್ಲಿ ಪ್ರಕಟಿಸಲಾಗುವುದು.

ಬನ್ನಿ, ನಾವುಗಳೆಲ್ಲ ಈ ವಿಪತ್ತಿನ ಪರಿಹಾರ ಕಾರ್ಯದಲ್ಲಿ ಭಾಗಿಗಳಾಗೋಣ, ಮಾನವೀಯತೆಯನ್ನು ಮೆರೆಯೋಣ.

**ಧನ್ಯವಾದಗಳೊಂದಿಗೆ,**

| ಸಹಿ/- | ಸಹಿ/- | ಸಹಿ/- |
|---|---|---|
| ಶ್ರೀ ಬಿ.ಹೆಚ್. ಕೃಷ್ಣಾರೆಡ್ಡಿ | ಶ್ರೀ ಜಗದೀಶ ಕವಟಗಿಮಠ | ಶರಣಗೌಡ ಜಿ. ಪಾಟೀಲ್ |
| ಅಧ್ಯಕ್ಷರು | ಉಪಾಧ್ಯಕ್ಷರು | ವ್ಯವಸ್ಥಾಪಕ ನಿರ್ದೇಶಕರು |